**Akashvani : Bangalore**
**National Bulletin In Kannada**
**28.05.2024 / 19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**28.05.2024 / 19.35 hrs**

**<><*<><>*><>**

ಮುಖ್ಯಾಂಶಗಳು

**೧. ಅಂತಿಮ ಹಂತದ ಲೋಕಸಭಾ ಚುನಾವಣೆಗೆ ರಂಗೇರಿದ ಕಣ; ವಿವಿಧ ರಾಜಕೀಯ ಪಕ್ಷಗಳ ಸ್ಟಾರ್ ಪ್ರಚಾರಕರಿಂದ ಬಿರುಸಿನ ಪ್ರಚಾರ**

**೨. ಮಧ್ಯಂತರ ಜಾಮೀನು ವಿಸ್ತರಣೆ ಕೋರಿ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅರ್ಜಿ; ತುರ್ತು ವಿಚಾರಣೆಗೆ ಸುಪ್ರೀಂಕೋರ್ಟ್ ನಕಾರ**

**೩. ತೀವ್ರಗೊಂಡ ರೆಮಾಲ್ ಚಂಡಮಾರುತ; ೧೩ ಮಂದಿ ಸಾವು**

**೪. ಫ್ರೆಂಚ್ ಒಪನ್ ಟೆನಿಸ್; ಇಂದಿನಿಂದ ಭಾರತದ ರೋಹನ್ ಬೋಪಣ್ಣ, ಯೂಕಿ ಭಾಂಬ್ರಿ ಅಭಿಯಾನ ಆರಂಭ**

**<><*<><>*><>**

ಲೋಕಸಭೆಯ ಏಳನೇ ಹಾಗೂ ಅಂತಿಮ ಹಂತದ ಚುನಾವಣೆಗೆ ಪ್ರಚಾರ ಬಿರುಸುಗೊಂಡಿದ್ದು, ವಿವಿಧ ರಾಜಕೀಯ ಪಕ್ಷಗಳ ನಾಯಕರು ಪ್ರಚಾರದಲ್ಲಿ ತೊಡಗಿದ್ದಾರೆ. ಬಿಜೆಪಿ ಹಿರಿಯ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರು, ಜಾರ್ಖಂಡ್‌ನ ಡುಮ್ಕಾ ವಿಮಾನ ನಿಲ್ದಾಣ ಮೈದಾನದಲ್ಲಿ ನಡೆದ ಸಾರ್ವಜನಿಕ ಸಭೆಯಲ್ಲಿ ಪಾಲ್ಗೊಂಡಿದ್ದರು. ಈ ವೇಳೆ ಮಾತನಾಡಿದ ಅವರು, ಜೂನ್ ೪ ರ ನಂತರ ಭ್ರಷ್ಟರ ವಿರುದ್ಧ ಕ್ರಮ ತೀವ್ರಗೊಳಿಸಲಾಗುವುದು ಎಂದು ತಿಳಿಸಿದರು. ಜಾರ್ಖಂಡ್‌ನಲ್ಲಿ ಕಾಂಗ್ರೆಸ್ ಮತ್ತು ಜಾರ್ಖಂಡ್ ಮುಕ್ತಿ ಮೋರ್ಚಾ ಪಕ್ಷವು ತಮ್ಮ ಅವಧಿಯಲ್ಲಿ ದೊಡ್ಡ ಮೊತ್ತದ ಹಣವನ್ನು ಲೂಟಿ ಮಾಡಿವೆ. ಭ್ರಷ್ಟ ಸಚಿವರು, ಸಂಸದರು ಮತ್ತು ಅಧಿಕಾರಿಗಳಿಗೆ ಸಂಬಂಧಿಸಿದ ಸ್ಥಳಗಳ ಮೇಲೆ ತನಿಖಾ ಸಂಸ್ಥೆಗಳು ದಾಳಿ ನಡೆಸಿದ ಸಂದರ್ಭಗಳಲ್ಲಿ ಅಪಾರ ಪ್ರಮಾಣದ ಹಣವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಹೇಳಿದ್ದಾರೆ. ಭ್ರಷ್ಟಾಚಾರ ಮತ್ತು ತುಷ್ಟೀಕರಣ ರಾಜಕೀಯಕ್ಕೆ  ಕಾಂಗ್ರೆಸ್, ಆರ್‌ಜೆಡಿ, ಜೆಎಂಎಂ ಒಳಗೊಂಡ ಐಎನ್‌ಡಿಐ ಮೈತ್ರಿಕೂಟವು ದೊಡ್ಡ ಮಾದರಿಯಾಗಿದೆ. ಇದರಿಂದ ದೇಶವನ್ನು ಮುಕ್ತಗೊಳಿಸಲು ಸಂಕಲ್ಪ ತೊಡಗಲಾಗಿದೆ ಎಂದು ತಿಳಿಸಿದ್ದಾರೆ. ಜಾರ್ಖಂಡ್‌ನಲ್ಲಿ ಜೆಎಂಎಂ ನೇತೃತ್ವದ ಆಡಳಿತಾರೂಢ ಮೈತ್ರಿಕೂಟವು ನುಸುಳುಕೋರರನ್ನು ಬೆಂಬಲಿಸುತ್ತಿದೆ ಮತ್ತು ಬುಡಕಟ್ಟು ಜನರ ಹಿತಾಸಕ್ತಿಗಳನ್ನು ಕಡೆಗಣಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಆರೋಪಿಸಿದ್ದಾರೆ. ಇದೇ ವೇಳೆ ಪಶ್ಚಿಮ ಬಂಗಾಳದ ಉತ್ತರ ಪರಾಗಣ ಜಿಲ್ಲೆಯ ಬರಾಸತ್ ಮತ್ತು ಬಸಿರ್‌ಹತ್ ಲೋಕಸಭಾ ಕ್ಷೇತ್ರಗಳಲ್ಲಿ ನಡೆದ ಚುನಾವಣಾ ರ್‍ಯಾಲಿಗಳನ್ನು ಉದ್ದೇಶಿಸಿ ಅವರು ಮಾತನಾಡಿದರು. ಉತ್ತರ ಪ್ರದೇಶದ ಗೋರಖ್‌ಪುರ ಕ್ಷೇತ್ರದಲ್ಲಿ ಪಕ್ಷದ ಅಭ್ಯರ್ಥಿ ಪರವಾಗಿ ಉತ್ತರ ಪ್ರದೇಶ ಮುಖ್ಯಮಂತ್ರಿ ಮತ್ತು ಬಿಜೆಪಿ ಹಿರಿಯ ನಾಯಕ ಯೋಗಿ ಆದಿತ್ಯನಾಥ್ ಮತಯಾಚಿಸಿದರು. ಕಂಪಿಯರ್‌ಗಂಜ್‌ನಲ್ಲಿ ನಡೆದ ಪ್ರಚಾರ ರ್‍ಯಾಲಿ ಉದೇಶಿಸಿ

ಮಾತನಾಡಿದ ಅವರು, ಬಡವರು ಮತ್ತು ಹಿಂದುಳಿದವರ ಕಲ್ಯಾಣಕ್ಕಾಗಿ ಕೇಂದ್ರ ಸರ್ಕಾರ ಅನೇಕ ಯೋಜನೆಗಳನ್ನು ಜಾರಿಗೆ ತಂದಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಂದ ಮೂರನೇ ಅವಧಿಯ ಸರ್ಕಾರದಲ್ಲಿ ೭೦ ವರ್ಷ ಮೇಲ್ಪಟ್ಟ ಜನರಿಗೆ ಪ್ರತ್ಯೇಕವಾಗಿ ಆಯುಷ್ಮಾನ್ ಕಾರ್ಡ್‌ಗಳನ್ನು ನೀಡಲಾಗುವುದು. ಇದರಿಂದ ೫ ಲಕ್ಷ ರೂಪಾಯಿವರೆಗೆ ನಗದು ರಹಿತ ಉಚಿತ ಆರೋಗ್ಯ ಚಿಕಿತ್ಸೆಯನ್ನು ಅವರು ಪಡೆಯಬಹುದಾಗಿದೆ ಎಂದು ತಿಳಿಸಿದ್ದಾರೆ. ಬಳಿಕ ಮಿರ್ಜಾಪುರದಲ್ಲಿ ನಡೆದ ಪ್ರಚಾರ ರ‍್ಯಾಲಿಯಲ್ಲಿ ಯೋಗಿ ಆದಿತ್ಯನಾಥ್ ಭಾಗವಹಿಸಿದ್ದರು. ಇನ್ನೊಂದೆಡೆ ಕುಷಿನಗರ ಜಿಲ್ಲೆಯಲ್ಲಿ ನಡೆದ ಪ್ರಚಾರ ರ‍್ಯಾಲಿಯನ್ನುದ್ದೇಶಿಸಿ ಮಾತನಾಡಿದ ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್, ಬಿಜೆಪಿಯು ಸಂವಿಧಾನವನ್ನು ಬದಲಾಯಿಸಲು ಬಯಸುತ್ತಿದೆ ಎಂದು ಆರೋಪಿಸಿದ್ದಾರೆ. ಇದೇ ವೇಳೆ ವಾರಾಣಸಿಯ ಮೋಹನ್ ಸರಾಯ್ ಪ್ರದೇಶದಲ್ಲಿ ನಡೆದ ಚುನಾವಣಾ ರ‍್ಯಾಲಿಯಲ್ಲಿ ಕಾಂಗ್ರೆಸ್ ಹಿರಿಯ ನಾಯಕ ರಾಹುಲ್ ಗಾಂಧಿ ಮತ್ತು ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಜಂಟಿಯಾಗಿ ಪಾಲ್ಗೊಂಡಿದ್ದರು. ಅಲ್ಲದೆ, ಬನ್ಸ್‌ಗಾಂವ್‌ನಲ್ಲಿ ನಡೆದ ಪರಿವರ್ತನಾ ಸಂಕಲ್ಪ ಸಭೆಯನ್ನುದ್ದೇಶಿಸಿ ಉಭಯ ನಾಯಕರು ಮಾತನಾಡಿದರು. ಹಿಮಾಚಲ ಪ್ರದೇಶದ ಉನಾ ಜಿಲ್ಲೆಯ ಗಾರ್ಗೆಟ್‌ನಲ್ಲಿ ನಡೆದ ಚುನಾವಣಾ ರ‍್ಯಾಲಿಯಲ್ಲಿ ಪಕ್ಷದ ಅಭ್ಯರ್ಥಿ ಪರ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ ಮತಯಾಚಿಸಿದರು. ಈ ವೇಳೆ ನಡೆದ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ದೇಶದಲ್ಲಿ ಹಣದುಬ್ಬರ, ನಿರುದ್ಯೋಗ ಸಮಸ್ಯೆ ತಗ್ಗಿಸಲು ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ವಿಫಲವಾಗಿದೆ ಎಂದು ದೂರಿದ್ದಾರೆ. ಮತ್ತೊಂದೆಡೆ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅವರು, ಶಿಮ್ಲಾ ಮತ್ತು ಕಿನ್ನೌರ್ ಜಿಲ್ಲೆಗಳಲ್ಲಿ ನಡೆದ ಪ್ರಚಾರ ರ‍್ಯಾಲಿಗಳಲ್ಲಿ ಪಾಲ್ಗೊಂಡಿದ್ದರು. ಈ ವೇಳೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರದ ಕಳೆದ ಹತ್ತು ವರ್ಷದ ಅವಧಿಯಲ್ಲಿ ದೇಶ ಅಭೂತಪೂರ್ವ ರೀತಿಯಲ್ಲಿ ಅಭಿವೃದ್ಧಿ ಕಂಡಿದ್ದು, ಅನೇಕ ಕಲ್ಯಾಣ ಯೋಜನೆಗಳನ್ನು ಜಾರಿಗೊಳಿಸಲಾಗಿದೆ ಎಂದು ಹೇಳಿದ್ದಾರೆ.

**<><*<><>*><>**

ಮೀಸಲಾತಿ ಹೆಸರಿನಲ್ಲಿ ಕಾಂಗ್ರೆಸ್ ಮತಬ್ಯಾಂಕ್ ರಾಜಕಾರಣದಲ್ಲಿ ತೊಡಗಿದೆ ಎಂದು ಪ್ರಧಾನಮಂತ್ರಿ ಹಾಗೂ ಬಿಜೆಪಿ ಹಿರಿಯ ನಾಯಕ ನರೇಂದ್ರ ಮೋದಿ ಆರೋಪಿಸಿದ್ದಾರೆ. ಸುದ್ದಿ ಸಂಸ್ಥೆಯೊಂದಕ್ಕೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಅವರು, ಮತಬ್ಯಾಂಕ್ ರಾಜಕಾರಣಕ್ಕಾಗಿ ಪ್ರತಿಪಕ್ಷಗಳಿಂದ ಭಾರತದ ಸಂವಿಧಾನದ ಮೂಲ ಆಶಯವನ್ನೇ ಉಲ್ಲಂಘಿಸಲಾಗುತ್ತಿದೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳನ್ನು ಪ್ರತಿಪಕ್ಷಗಳು ವಂಚಿಸುತ್ತಿವೆ ಎಂದು ಆರೋಪಿಸಿದ ಅವರು, ಈ ಸಮುದಾಯಗಳ ಜನರ ಹಕ್ಕುಗಳ ರಕ್ಷಣೆಗಾಗಿ ಹೋರಾಡುತ್ತೇನೆ ಎಂದು ಹೇಳಿದ್ದಾರೆ. ನಮ್ಮ ಸರ್ಕಾರ, ಭ್ರಷ್ಟಾಚಾರದ ವಿರುದ್ಧ ಶೂನ್ಯ ಸಹಿಷ್ಣುತೆ ಹೊಂದಿದೆ. ಕೇಂದ್ರ ತನಿಖಾ ಸಂಸ್ಥೆಗಳು ತಮ್ಮ ಕರ್ತವ್ಯವನ್ನು ನಿಭಾಯಿಸುತ್ತಿವೆ ಎಂದರು. ಲೋಕಸಭಾ ಚುನಾವಣೆಯಲ್ಲಿ ಜಮ್ಮು ಮತ್ತು ಕಾಶ್ಮೀರದಲ್ಲಿ ಹೆಚ್ಚಿನ ಮತದಾನವಾಗಿರುವುದು ತೃಪ್ತಿ ತಂದಿದೆ. ಕಾಶ್ಮೀರದ ಸಹೋದರ ಮತ್ತು ಸಹೋದರಿಯರು ಹೆಚ್ಚಿನ ಉತ್ಸಾಹದಿಂದ ಮತ ಚಲಾಯಿಸಲು ಮುಂದೆ ಬಂದಿರುವುದು ತೃಪ್ತಿದಾಯಕ ವಿಷಯವಾಗಿದೆ. ಈ ಮೂಲಕ ಜಗತ್ತಿಗೆ ಅವರು ಸಂದೇಶವನ್ನು ನೀಡಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

**<><*<><>*><>**

ಮಧ್ಯಂತರ ಜಾಮೀನು ಅವಧಿ ವಿಸ್ತರಿಸುವಂತೆ ಕೋರಿ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಸಲ್ಲಿಸಿರುವ ಅರ್ಜಿಯ ತುರ್ತು ವಿಚಾರಣೆಗೆ ಸುಪ್ರೀಂಕೋರ್ಟ್ ನಿರಾಕರಿಸಿದೆ. ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಜೆ.ಕೆ.ಮಹೇಶ್ವರಿ ಮತ್ತು ಕೆ.ವಿ.ವಿಶ್ವನಾಥನ್ ಅವರಿದ್ದ ರಜಾಕಾಲದ ನ್ಯಾಯಪೀಠ, ಈ ವಿಷಯದಲ್ಲಿ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್ ಅವರು ಸೂಕ್ತ ನಿರ್ಧಾರ ತೆಗೆದುಕೊಳ್ಳಲಿದ್ದಾರೆ ಎಂದು ತಿಳಿಸಿದೆ. ವೈದ್ಯಕೀಯ ತಪಾಸಣೆಗೆ ಒಳಗಾಗಲು ತಮಗೆ ನೀಡಿರುವ ಮಧ್ಯಂತರ ಜಾಮೀನನ್ನು ಇನ್ನೂ ಏಳು ದಿನಗಳ ಕಾಲ ವಿಸ್ತರಿಸುವಂತೆ ಕೋರಿ ಸಲ್ಲಿಸಿರುವ ಅರ್ಜಿಯನ್ನು ತುರ್ತು ವಿಚಾರಣೆ ನಡೆಸುವಂತೆ ಅರವಿಂದ್ ಕೇಜ್ರಿವಾಲ್ ನ್ಯಾಯಾಲಯಕ್ಕೆ ಮನವಿ ಮಾಡಿದ್ದರು. ದೆಹಲಿ ಅಬಕಾರಿ ನೀತಿ ಹಗಣರಕ್ಕೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಬಂಧಿತರಾಗಿದ್ದ ಅರವಿಂದ್ ಕೇಜ್ರಿವಾಲ್ ಅವರಿಗೆ ಲೋಕಸಭಾ ಚುನಾವಣೆಯಲ್ಲಿ ಪಾಲ್ಗೊಳ್ಳಲು ಸುಪ್ರೀಂಕೋರ್ಟ್, ೨೧ ದಿನಗಳ ಮಧ್ಯಂತರ ಜಾಮೀನು ಮಂಜೂರು ಮಾಡಿತ್ತು. ಇದರ ಅವಧಿ ಜೂನ್ ೨ ರಂದು ಕೊನೆಗೊಳ್ಳಲಿದೆ.

<><*<><>*><>

ರೆಮಲ್ ಚಂಡಮಾರುತದಿಂದ ಉಂಟಾದ ಅವಘಡದಿಂದ ಪಶ್ಚಿಮ ಬಂಗಾಳ ಮತ್ತು ಮಿಜೋರಾಮ್‌ನಲ್ಲಿ ಒಟ್ಟು ೧೩ ಮಂದಿ ಸಾವನ್ನಪ್ಪಿದ್ದಾರೆ. ಈ ಪೈಕಿ ಪಶ್ಚಿಮ ಬಂಗಾಳದಲ್ಲಿ ಆರು ಮಂದಿ ಮತ್ತು ಮಿಜೋರಾಮ್‌ನಲ್ಲಿ ಏಳು ಮಂದಿ ಮೃತಪಟ್ಟಿದ್ದಾರೆ. ಕೊಲ್ಕತ್ತಾ, ೨೪ ಪರಗಣ ಜಿಲ್ಲೆ ಮತ್ತು ಸುತ್ತಮುತ್ತಲಿನ ಜಿಲ್ಲೆಗಳಲ್ಲಿ ಬಿರುಗಾಳಿ ಸಹಿತ ಭಾರೀ ಮಳೆಯಾಗಿದೆ. ಪಶ್ಚಿಮ ಬಂಗಾಳದ ಕರಾವಳಿ ಪ್ರದೇಶಗಳಲ್ಲಿ ಕೃಷಿ ಜಮೀನಿಗೆ ನೀರು ನುಗ್ಗಿದೆ. ಮಳೆ ಪೀಡಿತ ಪ್ರದೇಶಗಳ ಜನರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ. ಅವರಿಗೆ ತಾತ್ಕಾಲಿಕ ಶಿಬಿರಗಳಲ್ಲಿ ವಸತಿ ಕಲ್ಪಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಮುಂದಿನ ೨೪ ಗಂಟೆಗಳಲ್ಲಿ ಉತ್ತರ ಬಂಗಾಳದಲ್ಲಿ ಧಾರಕಾರ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇನ್ನೊಂದೆಡೆ, ರೆಮಾಲ್ ಚಂಡಮಾರುತದ ಪರಿಣಾಮ ಅಸ್ಸಾಂ ಹಲವು ಜಿಲ್ಲೆಗಳಲ್ಲಿ ಭಾರೀ ಮಳೆಯಾಗಿದೆ. ಚಿರಾಂಗ್, ಗೋಲ್‌ಪಾರಾ, ಬಕ್ಸಾ, ದಿಮಾ ಹಸಾವೋ, ಕ್ಯಾಚಾರ್, ಹೈಲಕಂಡಿ, ಕರೀಮ್‌ಗಂಜ್ ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಿಸಲಾಗಿದೆ. ಅಲ್ಲದೇ, ಧುಬ್ರಿ, ದಕ್ಷಿಣ ಸಲ್ಮಾರ, ಬೊಂಗೈ ಗಾಂವ್, ಬಚಾಲಿ ಸೇರಿದಂತೆ ಕೆಲವು ಜಿಲ್ಲೆಗಳಲ್ಲಿ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಗುವಾಹಟಿಯಲ್ಲಿ ಭಾರೀ ಮಳೆಯಿಂದಾಗಿ ಜನ ಜೀವನ ಅಸ್ತವ್ಯಸ್ತವಾಗಿದೆ. ಮಳೆ ಪೀಡಿತ ಪ್ರದೇಶಗಳಿಗೆ ರಾಷ್ಟ್ರೀಯ ವಿಪ್ಪತ್ತು ನಿರ್ವಹಣಾ ಪಡೆ ಮತ್ತು ರಾಜ್ಯ ವಿಪತ್ತು ನಿರ್ವಹಣಾ ಪಡೆಯ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಅರುಣಾಚಲ ಪ್ರದೇಶ, ಮಿಜೋರಾಂ ಮತ್ತು ತ್ರಿಪುರಾದಲ್ಲಿ ಧಾರಾಕಾರ ಮಳೆಯಾಗಿದೆ. ಮುಂದಿನ ಕೆಲವು ದಿನಗಳಲ್ಲಿ ಕೂಡ ಪಶ್ಚಿಮ ಬಂಗಾಳ, ಅಸ್ಸಾಂ, ಅರುಣಾಚಲ ಪ್ರದೇಶ, ಮಿಜೋರಾಂ ಮತ್ತು ತ್ರಿಪುರಾದ ಹಲವು ಭಾಗಗಳಲ್ಲಿ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><*<><>*><>

ಕೇರಳದ ದಕ್ಷಿಣ ಭಾಗಗಳಲ್ಲಿ ಧಾರಾಕಾರ ಮಳೆಯಾಗಿದೆ. ರಾಜ್ಯದಲ್ಲಿ ಮಳೆ ಅವಘಡದಿಂದ ನಾಲ್ಕು ಮಂದಿ ಮೃತಪಟ್ಟಿದ್ದಾರೆ. ಕೊಟ್ಟಾಯಮ್ ಮತ್ತು ಎರ್ನಾಕುಲಂ ಜಿಲ್ಲೆಗಳಲ್ಲಿ ರೆಡ್ ಅಲರ್ಟ್ ಘೋಷಿಸಲಾಗಿದೆ. ತಿರುವನಂತಪುರಂ ಮತ್ತು ಎರ್ನಾಕುಲಂ ಜಿಲ್ಲೆಯ ತಗ್ಗು ಪ್ರದೇಶಗಳಲ್ಲಿ ನೀರು ನುಗ್ಗಿದೆ. ಕೇರಳ ಮತ್ತು ತಮಿಳುನಾಡು ಕರಾವಳಿಯಲ್ಲಿ ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಎಚ್ಚರಿಕೆ ನೀಡಲಾಗಿದೆ. ಕೆಲವು

ಪ್ರದೇಶಗಳಲ್ಲಿ ಪ್ರವಾಸೋದ್ಯಮ ಚಟುವಟಿಕೆಗಳನ್ನು ನಿಷೇಧಿಸಲಾಗಿದೆ. ಮುಂದಿನ ಕೆಲವು ದಿನಗಳಲ್ಲಿ ಪಟ್ಟಣಮ್‌ತಿಟ್ಟ, ಅಲಪ್ಪುಳ, ಕೊಟ್ಟಾಯಂ, ಎರ್ನಾಕುಲಂ ಮತ್ತು ಇಡುಕ್ಕಿ ಜಿಲ್ಲೆಗಳಲ್ಲಿ ಭಾರೀ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

**<><*<><>*><>**

ಇಂದು ದೇಶದ ಮಹಾನ್ ಸ್ವಾತಂತ್ರ್ಯ ಹೋರಾಟಗಾರ ವೀರ ಸಾವರ್ಕರ್ ಅವರ ಜನ್ಮದಿನ. ಈ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಸಾವರ್ಕರ್ ಅವರಿಗೆ ಗೌರವ ನಮನ ಸಲ್ಲಿಸಿದ್ದಾರೆ. ಮಾತೃಭೂಮಿಯ ಸೇವೆಯಲ್ಲಿ ತಮ್ಮ ಜೀವನವನ್ನು ಮುಡುಪಾಗಿಟ್ಟ ವೀರ ಸಾವರ್ಕರ್ ಅವರು ದೇಶವಾಸಿಗಳಿಗೆ ಸದಾ ಸ್ಫೂರ್ತಿಯ ಚಿಲುಮೆಯಾಗಿದ್ದಾರೆ ಎಂದು ಪ್ರಧಾನಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಬರೆದುಕೊಂಡಿದ್ದಾರೆ. ನವದೆಹಲಿಯ ಸಂವಿಧಾನ ಸದನದ ಸೆಂಟ್ರಲ್ ಹಾಲ್‌ನಲ್ಲಿ ವಿನಾಯಕ ದಾಮೋದರ ಸಾವರ್ಕರ್ ಅವರ ಭಾವಚಿತ್ರಕ್ಕೆ ಲೋಕಸಭಾ ಸ್ಪೀಕರ್ ಓಂ ಬಿರ್ಲಾ, ಪುಷ್ಪ ನಮನ ಸಲ್ಲಿಸಿದರು. ಇದೇ ವೇಳೆ ರಾಜ್ಯಸಭಾ ಉಪಾಧ್ಯಕ್ಷ ಹರಿವಂಶ್ ನಾರಾಯಣ್ ಸಿಂಗ್ ಸೇರಿದಂತೆ ಸಂಸದರು ಮತ್ತು ಮಾಜಿ ಸಂಸದರು ಗೌರವ ನಮನ ಸಲ್ಲಿಸಿದರು.

**<><*<><>*><>**

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಮುಂಬೈ ಷೇರು ಸಂವೇದಿ ಸೂಚ್ಯಂಕ- ಸೆನ್ಸೆಕ್ಸ್ ೨೨೦ ಅಂಕಗಳು ಇಳಿಕೆಯಾಗಿ, ದಿನದ ಅಂತ್ಯಕ್ಕೆ ೭೫ ಸಾವಿರದ ೧೭೦ ಅಂಕಗಳು ದಾಖಲಾಗಿವೆ. ಅದೇ ರೀತಿ ರಾಷ್ಟ್ರೀಯ ಸಂವೇದಿ ಸೂಚ್ಯಂಕ - ನಿಫ್ಟಿ ೪೪ ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೭ ಸಾವಿರದ ೮೮೮ ಅಂಕಗಳು ದಾಖಲಾಗಿದೆ. ಡಾಲರ್ ಎದುರು ರೂಪಾಯಿ ಮೌಲ್ಯ ೮೩ ರೂಪಾಯಿ ೧೮ ಪೈಸೆಯಷ್ಟಾಗಿದೆ.

**<><*<><>*><>**

ಫ್ರಾನ್ಸ್‌ನ ಪ್ಯಾರಿಸ್‌ನಲ್ಲಿ ನಡೆಯುತ್ತಿರುವ ಫ್ರೆಂಚ್ ಓಪನ್ ಟೆನ್ನಿಸ್ ಟೂರ್ನಿಯಲ್ಲಿಂದು ಭಾರತದ ಪ್ರಮುಖ ಆಟಗಾರರಾದ ರೋಹನ್ ಬೋಪಣ್ಣ ಮತ್ತು ಯೂಕಿ ಭಾಂಬ್ರಿ ತಮ್ಮ ಅಭಿಯಾನ ಆರಂಭಿಸಲಿದ್ದಾರೆ. ಪುರುಷರ ಡಬಲ್ಸ್‌ನ ಮೊದಲ ಸುತ್ತಿನಲ್ಲಿ ಎರಡನೇ ಶ್ರೇಯಾಂಕದ ಬೋಪಣ್ಣ ಮತ್ತು ಆಸ್ಟ್ರೇಲಿಯಾದ ಮ್ಯಾಥ್ಯೂಎಬ್ಡೆನ್ ಜೋಡಿಯು, ಫಿನ್ಲೆಂಡ್‌ನ ಎಮಿಲ್ ರುಸುವೊರಿ ಮತ್ತು ಹಂಗೇರಿಯ ಮಾರ್ಟನ್-ಫುಕ್ಸೊವಿಕ್ಸ್ ಜೋಡಿಯನ್ನು ಎದುರಿಸಲಿದೆ. ಇನ್ನೊಂದೆಡೆ, ಶ್ರೇಯಾಂಕರಹಿತ ಜೋಡಿಯಾದ ಯೂಕಿ ಭಾಂಬ್ರಿ ಮತ್ತು ಫ್ರಾನ್ಸ್‌ನ ಅಲ್ಬಾನೊ ಒಲಿವೆಟ್ಟಿ, ರಷ್ಯಾದ ರೋಮನ್ ಸಫಿಯುಲಿನ್ ಮತ್ತು ಆಸ್ಟ್ರೇಲಿಯಾದ ಜಾನ್‌ಪೀರ್ಸ್ ಜೋಡಿ ವಿರುದ್ಧ ಸೆಣಸಲಿದೆ.

**<><*<>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಿಗ್ಗೆ ೭.೦೫ ಕ್ಕೆ **<>*><>**